# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 167 (154) |
| ಸದಸ್ಯರ ಹೆಸರು | : | ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 14-12-2021 |
| ಉತ್ತರಿಸುವ ಸಚಿವರು | : | ನಗರಾಭಿವೃದ್ಧಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಳಗಾವಿ ಮಹಾನಗರದಲ್ಲಿ ಹಲವು ಕಾಮಗಾರಿಗಳು ನಿಧಾನಗತಿಯಲ್ಲಿ ಸಾಗುತ್ತಿದ್ದು ಜನಜೀವನ ಅಸ್ತವ್ಯಸ್ತವಾಗಿ ಜನರು ಹೈರಾಣಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದಲ್ಲಿ, ಅಪೂರ್ಣ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಬೆಳಗಾವಿ ನಗರವು ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿ ದಿನಾಂಕ:28.01.2016 ರಂದು ಆಯ್ಕೆಯಾಗಿದ್ದು, ಸದರಿ ಯೋಜನೆಯಡಿಯಲ್ಲಿ ಪ್ರಮುಖವಾಗಿ ಸ್ಮಾರ್ಟ್ ರಸ್ತೆಗಳ ಅಭಿವೃದ್ಧಿ, ಉದ್ಯಾನವನಗಳ ಅಭಿವೃದ್ಧಿ, ಕರೆ ಪುನರ್ ನವೀಕರಣ, ಸ್ಮಾರ್ಟ್ ಸ್ಕೂಲ್ ಹೀಗೆ ಹಲಾವರು ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br>ಯೋಜನೆಯಡಿ ಪ್ರಮುಖವಾಗಿ ಸ್ಮಾರ್ಟ್ ರಸ್ತೆಗಳ ಅಭಿವೃದ್ಧಿ, ಒಳಚರಂಡಿ ಹಾಗೂ ಇನ್ನಿತರೆ ಮೂಲಸೌಕರ್ಯ ಅಭಿವೃದ್ಧಿ ಯೋಜನೆಗಳನ್ನು ನಗರದ ಜನನಿಬಿಡ ಪ್ರದೇಶಗಳಲ್ಲಿ ಅನುಷ್ಠಾನಗೊಳಿಸಬೇಕಾಗಿದ್ದು, ಸ್ಥಳೀಯವಾಗಿ ಬಹಳ ಸಮಸ್ಯೆಗಳನ್ನು ಎದುರಿಸಬೇಕಾಗಿರುತ್ತದೆ. ಅಲ್ಲದೇ ಈ ಯೋಜನೆಗಳಲ್ಲಿ ಬೆಸ್ಕಾಂ, ಬಿಎಸ್‌ಎನ್‌ಎಲ್, ನೀರು ಸರಬರಾಜು ಮಂಡಳಿ ಹಾಗೂ ಇತರೆ ಇಲಾಖೆಗಳ ಯುಟಿಲಿಟಿ ಶಿಫ್ಟಿಂಗ್ ಅವಶ್ಯಕತೆಯಿದ್ದು, ಇದರಿಂದ ಕಾಮಗಾರಿಗಳ ಅನುಷ್ಠಾನದಲ್ಲಿ ಅನಿವಾರ್ಯ ವಿಳಂಬವಾಗುತ್ತಿದೆ.<br><br>ಇದಲ್ಲದೇ, 2020 ಹಾಗೂ 2021ರ ಸಾಲಿನಲ್ಲಿ ಕೋವಿಡ್ -19ರ ಪರಿಸ್ಥಿತಿಯಿಂದಾಗಿ ಕಾಮಗಾರಿಗಳ ಸ್ಥಗಿತ ಹಾಗೂ ಬೆಳಗಾವಿಯಲ್ಲಿ ಆಗುವ ಅತಿಯಾದ ಮಳೆ ಕಾರಣಗಳಿಂದಾಗಿ ಕಾಮಗಾರಿಗಳ ಪ್ರಗತಿ ವಿಳಂಬವಾಗುತ್ತಿರುವುದು ಕಂಡು ಬಂದಿದೆ.<br><br>ಈ ಬಗ್ಗೆ ಸರ್ಕಾರವು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ 'ನಗರ ಮಟ್ಟದ ಸಲಹಾ ಸಮಿತಿ' (CLAF) ಮುಖಾಂತರ ನಗರದಲ್ಲಿನ ಯೋಜನೆಯ ಪ್ರಗತಿ ಪರಿಶೀಲನೆ ಹಾಗೂ ಮಾರ್ಗದರ್ಶನ ನೀಡುವಂತಹ ಪೂರಕ ಕ್ರಮಗಳ ಮೂಲಕ ಯೋಜನೆಯ ಅನುಷ್ಠಾನಕ್ಕೆ ಎದುರಾಗಿರುವ ಸವಾಲುಗಳಿಗೆ ಸೂಕ್ತ ಪರಿಹಾರಗಳನ್ನು ಕಂಡುಕೊಂಡು ಈಗ ಕಾಮಗಾರಿಗಳನ್ನು ತ್ವರಿತವಾಗಿ ಅನುಷ್ಠಾನಗೊಳಿಸಲಾಗುತ್ತಿದೆ. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ನಿಯಮಿತವಾಗಿ ಪ್ರಗತಿ ಪರಿಶೀಲನಾ ಸಭೆಗಳನ್ನು ಸಹಾ ನಡೆಸಲಾಗುತ್ತಿದ್ದು, ಬಾಕಿ ಇರುವ ಎಲ್ಲಾ ಕಾಮಗಾರಿಗಳನ್ನು ಜೂನ್-2023 ರೊಳಗೆ ಪೂರ್ಣಗೊಳಿಸಲು ಕಟ್ಟು ನಿಟ್ಟಿನ ಸೂಚನೆ ನೀಡಲಾಗಿದೆ.<br><br>ಕಾಮಗಾರಿಗಳ ಅನುಷ್ಠಾನದ ಸಮಯದಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಸೂಕ್ತ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಂಡು ಶೀಘ್ರವಾಗಿ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಸೂಚನೆ ನೀಡಲಾಗಿದೆ. |